ಆ) ಟ್ಯಾಂಕುಗಳಿಗೆ ನೀರು ಹೋಗುವಂತೆ ಎಷ್ಟು ದಿನಗಳಲ್ಲಿ ಮಾಡಲಾಗುವುದು?

ಇ) ಇಡೀ ನೀರಿಗೆ ಒಂದೇ ಕೈಪಂಪು ಇದ್ದು ಅದು ಕೆಟ್ಟಾಗ 2-3 ಕಿಲೋಮೀಟರ್ ದೂರದಿಂದ ನೀರು ತರಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಇನ್ನೊಂದು ಕೈಪಂಪು ಕೊರೆಯಿಸಲು ಸರ್ಕಾರದವರು ಕ್ರಮ ಕೈಗೊಳ್ಳುವರೇ?

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು):

ಅ) ಬಂದಿದೆ.

ಆ) ಒಂದು ವಾರದೊಳಗಾಗಿ ಸೂಕ್ತ ವ್ಯವಸ್ಥೆಯನ್ನು ಮಾಡಲಾಗುವುದು.

ಇ) ಗ್ರಾಮಕ್ಕೆ ಕಿರುನೀರು ಸರಬರಾಜು ವ್ಯವಸ್ಥೆಯಿದ್ದು ವಿದ್ಯುತ್ ಪೂರೈಕೆಯಲ್ಲಿ ಅಡಚಣೆ ಉಂಟಾದಾಗ ಒಂದೇ ಕೈಪಂಪು ಕಾರ್ಯನಿರ್ವಹಿಸುತ್ತಿರುವುದರಿಂದ ಕುಡಿಯುವ ನೀರಿಗೆ ತೊಂದರೆಯಾಗುತ್ತದೆ.

ಈ) ಇದನ್ನು ಪರಿಶೀಲಿಸಲಾಗುವುದು.

ಉದ್ಯೋಗ ಭರವಸೆ ಯೋಜನೆ

52 (114)

ಶ್ರೀ ಯು.ಬಿ.ಬಣಕಾರ್ (ಹಿರೇಕೆರೂರು): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 31-1-1998 ಜಿಲ್ಲಾವಾರು ಉದ್ಯೋಗ ಭರವಸೆ ಯೋಜನೆಯಡಿಯಲ್ಲಿ ಬಿಡುಗಡೆ ಆದ ಹಣ ಎಷ್ಟು? ಹಾಗೂ ಖರ್ಚಾದ ಹಣ ಎಷ್ಟು?

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ) ಪ್ರಸಕ್ತ ಸಾಲಿನಲ್ಲಿ 31-1-1998ರವರೆಗೆ ಉದ್ಯೋಗ ಭರವಸೆ ಯೋಜನೆಯಡಿ ಜಿಲ್ಲಾವಾರು ಬಿಡುಗಡೆಯಾಗಿರುವ ಮೊತ್ತ ಹಾಗೂ ಖರ್ಚಾಗಿರುವ ಮೊತ್ತದ ವಿವರಗಳು ಈ ಕೆಳಕಂಡಂತಿರುತ್ತದೆ.

ಕ್ರಮ ಸಂಖ್ಯೆ	ಜಿಲ್ಲೆ	31-1-98ರವರೆಗೆ ಬಿಡುಗಡೆಯಾದ ಹಣ (ರೂ. ಲಕ್ಷಗಳಲ್ಲಿ)	31-1-98ರವರೆಗೆ ಖರ್ಚಾದ ಹಣ
1.	ಬೆಂಗಳೂರು (ನಗರ)	125.00	101.210
2.	ಬೆಂಗಳೂರು (ಗ್ರಾಮಾಂತರ)	625.00	719.870
3.	ಕೋಲಾರ	625.00	801.670
4.	ತುಮಕೂರು	875.00	1065.000
5.	ಚಿತ್ರದುರ್ಗ	750.00	735.241
6.	ಶಿವಮೊಗ್ಗ	425.00	297.843
7.	ಮೈಸೂರು	825.00	845.410
8.	ಮಂಡ್ಯ	350.00	262.014
9.	ಹಾಸನ	575.00	750.448
10.	ಚಿಕ್ಕಮಗಳೂರು	500.00	361.191
11.	ಕೊಡಗು	225.00	240.036
12.	ದಕ್ಷಿಣ ಕನ್ನಡ	775.00	411.428
13.	ಬೆಳಗಾಂ	825.00	603.329
14.	ಬಿಜಾಪುರ	950.00	1272.950
15.	ಧಾರವಾಡ	1275.00	1221.200
16.	ಉತ್ತರ ಕನ್ನಡ	425.00	206.000
17.	ಗುಲ್ಬರ್ಗಾ	900.00	612.898
18.	ರಾಯಚೂರು	650.00	805.440

19.	ಬಳ್ಳಾರಿ	675.00	922.470
20.	ಬೀದರ್	475.00	202.303
	ಒಟ್ಟು	12850.00	12437.950

ಹಿರೇಕೆರೂರು ಆಸ್ಪತ್ರೆಯಲ್ಲಿ ವೈದ್ಯರಿಲ್ಲದಿರುವುದು

53 (113)

ಶ್ರೀ ಯು.ಬಿ.ಬಣಕಾರ್ (ಹಿರೇಕೆರೂರು): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಿರೆಕೆರೂರು ತಾಲ್ಲೂಕು ಆಸ್ಪತ್ರೆಯಲ್ಲಿ ವೈದ್ಯರಿಲ್ಲದೆ ನಾಗರೀಕರಿಗೆ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಹೌದು

ಆ) ಸ್ನಾತಕೋತ್ತರ ವ್ಯಾಸಂಗ ಮುಗಿಸಿ ಬರುವ ವೈದ್ಯಾಧಿಕಾರಿಗಳನ್ನು ನೇಮಕ ಮಾಡುವ ಮೂಲಕ ಹಾಗೂ 1998ರ ಸಾರ್ವತ್ರಿಕ ವರ್ಗಾವಣೆ ಸಮಯದಲ್ಲಿ ವೈದ್ಯರನ್ನು ವರ್ಗಾಯಿಸುವ ಮೂಲಕ ತುಂಬಲು ಕ್ರಮ ಕೈಗೊಳ್ಳಲಾಗುವುದು.

ಮಾಗಡಿ ಕ್ಷೇತ್ರಕ್ಕೆ ಕುಡಿಯುವ ನೀರಿನ ಸಮಸ್ಯೆ

54 (67)

ಶ್ರೀ ಹೆಚ್.ಸಿ.ಬಾಲಕೃಷ್ಣ (ಮಾಗಡಿ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾಗಡಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ತೀವ್ರ ನೀರಿನ ತೊಂದರೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ಈ ಪ್ರದೇಶಗಳ ಪಟ್ಟಿ ನೀಡುವುದು)